## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 669(798) |
| ಸದಸ್ಯರ ಹೆಸರು | : | ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾಗಿದ ದಿನಾಂಕ | : | 23.07.2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯು ಪ್ರಾರಂಭವಾದ ವರ್ಷ ಯಾವುದು; ಮತ್ತು ಯಾವ ಹಂತದಲ್ಲಿದೆ; | • ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ (ಹಂತ-4) ಯನ್ನು 302 ನಗರ ಸ್ಥಳೀಯ ಸಂಸ್ಥೆಗಳಲ್ಲಿ ರೂ.3885.00 ಕೋಟಿಗಳ ಅನುದಾನದಲ್ಲಿ ಕೈಗೊಳ್ಳಲು 2022-23ರಿಂದ 2024-25ನೇ ಸಾಲಿನವರೆಗೆ 3 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಲು ದಿನಾಂಕ:14-01-2022 ರಂದು ಮಾರ್ಗಸೂಚಿಯನ್ನು ಹೊರಡಿಸಲಾಗಿದೆ.<br>• ಸದರಿ ಯೋಜನೆಯಡಿ ಕ್ರಿಯಾ ಯೋಜನೆ ಮೊತ್ತ ರೂ.3302.25 ಲಕ್ಷಗಳಲ್ಲಿ (ಶೇಕಡ 85 ರಷ್ಟು) ಒಟ್ಟು ಮೊತ್ತ ರೂ.816.00 ಲಕ್ಷಗಳು ಬಿಡುಗಡೆಯಾಗಿದ್ದು, ಮೊತ್ತ ರೂ.689.84 ಲಕ್ಷಗಳು ವೆಚ್ಚವಾಗಿರುತ್ತದೆ.<br>• ಸದರಿ ಯೋಜನೆಯಡಿ ಅನುಮೋದನೆಯಾಗಿರುವ ಒಟ್ಟು 7086 ಸಂಖ್ಯೆಯ ಕಾಮಗಾರಿಗಳಲ್ಲಿ 1007 ಸಂಖ್ಯೆಯ ಕಾಮಗಾರಿಗಳು ಪೂರ್ಣಗೊಂಡಿದ್ದು, 2619 ಸಂಖ್ಯೆಯ ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ ಹಾಗೂ 1210 ಸಂಖ್ಯೆಯ ಕಾಮಗಾರಿಗಳು ಟೆಂಡರ್ ಹಂತದಲ್ಲಿದ್ದು, ಇನ್ನು 2250 ಸಂಖ್ಯೆಯ ಕಾಮಗಾರಿಗಳಿಗೆ ಟೆಂಡರ್ ಕರೆಯಬೇಕಾಗಿರುತ್ತದೆ. |
| ಆ) | ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿ ಪ್ರಾರಂಭವಾಗದ ಕಾಮಗಾರಿಗಳ ಬದಲಾಗಿ ಪರಿಷ್ಕೃತ ಕ್ರಿಯಾಯೋಜನೆ ಅನುಮೋದನೆ ಪಡೆಯಲು ಶಿಫಾರಸ್ಸು ಮಾಡುವಾಗ ತೆಗೆದುಕೊಂಡ ಮಾನದಂಡಗಳೇನು; ಸದರಿ ಯೋಜನೆಯಲ್ಲಿ ಪಾರದರ್ಶಕತೆ ಕಾಯ್ದೆಯನ್ನು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ (ಮುನಿಸಿಪಾಲಿಟಿ) ಯೋಜನೆ (ಹಂತ-4)ಯಡಿ ಮೂಲ ಕ್ರಿಯಾಯೋಜನೆಯ ಯಾವ ಘಟಕದಲ್ಲಿ ಕಾಮಗಾರಿಗಳು ಅನುಮೋದನೆಯಾಗಿರುತ್ತದೋ ಅದೇ ಘಟಕದಡಿ ಅನುಮೋದನೆ ನೀಡಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಿರುವುದರಿಂದ ಮಾರ್ಗಸೂಚಿಯಲ್ಲಿನ ಮಾನದಂಡವನ್ನು ಪರಿಷ್ಕೃತ ಕ್ರಿಯಾ ಯೋಜನೆ ಅನುಮೋದನೆ ಮಾಡುವ ಸಂದರ್ಭದಲ್ಲಿ ಪಾಲಿಸಲಾಗುವುದು. ಸದರಿ ಮಾರ್ಗಸೂಚಿಯನ್ನು ಹಾಗೂ ಮಾರ್ಗಸೂಚಿಯ ತಿದ್ದುಪಡಿಗಳನ್ನು **ಅನುಬಂಧ**ದಲ್ಲಿ ನೀಡಿದೆ. |

| | | |
|---|---|---|
| ಇ) | ಸಣ್ಣ ಕಾಮಗಾರಿಗಳನ್ನು ಪ್ಯಾಕೇಜ್ ಮಾಡಿ ಟೆಂಡರ್ ಹಂಚಿಕೆ ಮಾಡುವುದರಲ್ಲಿನ ಮಾನದಂಡಗಳೇನು; ಸದರಿ ಮಾನದಂಡಗಳನ್ನು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಣ್ಣ ಕಾಮಗಾರಿಗಳನ್ನು ಪ್ಯಾಕೇಜ್ ಮಾಡಿ ಟೆಂಡರ್ ಹಂಚಿಕೆ ಮಾಡುವುದರಲ್ಲಿನ ಮಾನದಂಡಗಳನ್ನು ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯ ಮಾರ್ಗಸೂಚಿ ಆದೇಶ ಸಂಖ್ಯೆ:ನಅಇ/ 124/ ಸಮಸ/ 2021 ದಿನಾಂಕ:14-01-2024 ರಲ್ಲಿನ ಕಂಡಿಕೆ 16 ಮತ್ತು 17 ಹಾಗೂ ತಿದ್ದುಪಡಿ ಆದೇಶ ದಿನಾಂಕ:14-03 2022 ರಂತೆ ಪಾಲಿಸಲಾಗಿರುತ್ತದೆ (**ಅನುಬಂಧ-2**). |
| ಈ) | ನಡೆಯದ ಕಾಮಗಾರಿಗಳ ಪರಿಷ್ಕೃತ ಕ್ರಿಯಾಯೋಜನೆ ರೂಪಿಸುವಾಗ ಉದ್ದೇಶಪೂರ್ವಕವಾಗಿ ತಪ್ಪೆಸಗಿದ್ದು, ಇದರಲ್ಲಿ ಭಾಗಿಯಾದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗಿದೆಯೇ; | |
| ಉ) | ಹಾಗಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮ ಜರುಗಿಸಲಾಗಿದೆ ಹಾಗೂ ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಗಳ ಸಮರ್ಪಕ ಜಾರಿಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ಸಮಗ್ರ ಮಾಹಿತಿ ನೀಡುವುದು) | ಈ ರೀತಿಯ ಯಾವುದೇ ಪ್ರಕರಣಗಳು ಇರುವುದಿಲ್ಲ. |

ಕಡತ ಸಂಖ್ಯೆ:ನಅಇ 87 ಸಮಸ 2024

**(ರಹೀಂ ಖಾನ್)**
ಪೌರಾಡಳಿತ ಮತ್ತು ಹಜ್ ಸಚಿವರು